**ಕರ್ನಾಟಕ ಸರ್ಕಾರ**

ಸಂಖ್ಯೆ:ಗ್ರಾಅಪ 73 ಗ್ರಾಪಂಕಾ 2020 (1)

ಕರ್ನಾಟಕ ಸರ್ಕಾರದ ಸಚಿವಾಲಯ,
ಬಹುಮಹಡಿ ಕಟ್ಟಡ,
ಬೆಂಗಳೂರು, ದಿನಾಂಕ:07.07.2020

## ಸುತ್ತೋಲೆ

**ವಿಷಯ:** ಕೋವಿಡ್-19 (ಕೊರೊನಾ ವೈರಸ್) ವ್ಯಾಪಕವಾಗಿ ಹರಡದಂತೆ ಗ್ರಾಮ ಪಂಚಾಯತಿಗಳು ಮುಂಜಾಗ್ರತಾ ಕ್ರಮಗಳನ್ನು ಕೈಗೊಳ್ಳುವ ಬಗ್ಗೆ.

**ಉಲ್ಲೇಖ:** ಸರ್ಕಾರದ ಸುತ್ತೋಲೆ ಸಂಖ್ಯೆ:ಗ್ರಾಅಪ 86 ಉಖಾಯೋ 2019 ದಿನಾಂಕ: 27-03-2020.

******

ಕೋವಿಡ್-19 (ಕೊರೊನಾ ವೈರಸ್) ಕಾಯಿಲೆಯು ಸಾಂಕ್ರಾಮಿಕ ರೋಗವಾಗಿದ್ದು, ವಿಶ್ವದಾದ್ಯಂತ ಸಾರ್ವಜನಿಕರಲ್ಲಿ ವ್ಯಾಪಕವಾಗಿ ಹರಡುತ್ತಿರುವುದು ತಿಳಿದ ವಿಷಯವಾಗಿದೆ. ಈ ಕಾಯಿಲೆಯನ್ನು ನಿಯಂತ್ರಿಸಲು ಹಾಗೂ ಒಬ್ಬರಿಂದ ಒಬ್ಬರಿಗೆ ಹರಡದಂತೆ ತಡೆಗಟ್ಟಲು ಸರ್ಕಾರವು ಹಲವಾರು ಕಟ್ಟುನಿಟ್ಟಿನ ಕ್ರಮಗಳನ್ನು ಕೈಗೊಂಡಿದೆ. ರಾಜ್ಯದ ಗ್ರಾಮೀಣ ಪ್ರದೇಶಗಳಲ್ಲಿ ಈ ಸೋಂಕು ಹರಡದಂತೆ ಗ್ರಾಮ ಪಂಚಾಯತಿಗಳ ವತಿಯಿಂದ ಕೈಗೊಳ್ಳಬೇಕಾದ ಕ್ರಮಗಳ ಬಗ್ಗೆ ಉಲ್ಲೇಖಿತ ಸರ್ಕಾರದ ಸುತ್ತೋಲೆಯಲ್ಲಿ ಗ್ರಾಮ ಪಂಚಾಯತಿ ಮಟ್ಟದ ಕಾರ್ಯಪಡೆ ಮತ್ತು ಗ್ರಾಮ ಮಟ್ಟದ ಕಾರ್ಯಪಡೆ ರಚಿಸಿ ಆದೇಶಿಸಲಾಗಿದೆ.

ಪ್ರಸ್ತುತ ಗ್ರಾಮ ಪಂಚಾಯತಿಗಳ 5 ವರ್ಷಗಳ ಅವಧಿಯು ಪೂರ್ಣಗೊಂಡಿದ್ದು, ಗ್ರಾಮ ಪಂಚಾಯತಿಗಳಿಗೆ ಆಡಳಿತಾಧಿಕಾರಿಗಳನ್ನು ಜಿಲ್ಲಾಧಿಕಾರಿಗಳು ನೇಮಕ ಮಾಡಿರುವುದರಿಂದ ಪ್ರಸಕ್ತ ಸನ್ನಿವೇಶಕ್ಕನುಗುಣವಾಗಿ ಉಲ್ಲೇಖಿತ ಸರ್ಕಾರದ ಸುತ್ತೋಲೆಯಲ್ಲಿನ ಗ್ರಾಮ ಪಂಚಾಯತಿ ಮಟ್ಟದ ಕಾರ್ಯಪಡೆ ಮತ್ತು ಗ್ರಾಮ ಮಟ್ಟದ ಕಾರ್ಯಪಡೆಯನ್ನು ಈ ಕೆಳಕಂಡಂತೆ ಪರಿಷ್ಕರಿಸಿದೆ.

**1. ಗ್ರಾಮ ಪಂಚಾಯತಿ ಮಟ್ಟದ ಕಾರ್ಯಪಡೆ.-**

| ಕ್ರ.ಸಂ. | ಸಮಿತಿ ಸದಸ್ಯರ ವಿವರ | ಹುದ್ದೆ |
|---|---|---|
| 1 | ಗ್ರಾಮ ಪಂಚಾಯತಿ ಆಡಳಿತಾಧಿಕಾರಿ | ಅಧ್ಯಕ್ಷರು |
| 2 | ಪ್ರಾಥಮಿಕ / ಪ್ರೌಢ ಶಾಲಾ ಶಿಕ್ಷಕರು | ಸದಸ್ಯರು |
| 3 | ಗ್ರಾಮ ಪಂಚಾಯತಿ ಗ್ರಂಥಾಲಯ ಮೇಲ್ವಿಚಾರಕರು | ಸದಸ್ಯರು |
| 4 | ಕೇಂದ್ರ ಸ್ಥಾನದ ಗ್ರಾಮ ಲೆಕ್ಕಾಧಿಕಾರಿ/ಕಂದಾಯ ನಿರೀಕ್ಷಕರು/ ಹೋಬಳಿ ಕೇಂದ್ರ ಸ್ಥಾನವಾಗಿದ್ದಲ್ಲಿ ಉಪ ತಹಶೀಲ್ದಾರ್ | ಸದಸ್ಯರು |
| 5 | ಸ್ಥಳೀಯ ಪೊಲೀಸ್ ಠಾಣೆಯ ಎಸ್.ಎಚ್.ಓ. ಅಥವಾ ಅವರು ನೇಮಿಸಿದ ಪ್ರತಿನಿಧಿ | ಸದಸ್ಯರು |
| 6 | ಸ್ಥಳೀಯ ಆರೋಗ್ಯ ಕೇಂದ್ರದ ವೈದ್ಯಾಧಿಕಾರಿ ಅಥವಾ ಅವರ ಪ್ರತಿನಿಧಿ | ಸದಸ್ಯರು |
| 7 | ಅಂಗನವಾಡಿ ಮೇಲ್ವಿಚಾರಕರು ಅಥವಾ ಅವರ ಪ್ರತಿನಿಧಿ | ಸದಸ್ಯರು |

Scanned with CamScanner

| | | |
|---|---|---|
| 8 | ಎ.ಎನ್.ಎಂ/ಆಶಾ ಕಾರ್ಯಕರ್ತೆಯರು | ಸದಸ್ಯರು |
| 9 | ಸ್ತ್ರೀಶಕ್ತಿ ಸ್ವ ಸಹಾಯ ಗುಂಪುಗಳ ಪ್ರತಿನಿಧಿ | ಸದಸ್ಯರು |
| 10 | ಗ್ರಾಮ ಮಟ್ಟದ ಪುನರ್ ವಸತಿ ಕಾರ್ಯಕರ್ತರು (VRW) | ಸದಸ್ಯರು |
| 11 | ಸ್ಥಳೀಯವಾಗಿ ಮಹಿಳಾ ಸ್ವ-ಸಹಾಯ ಸಂಘದ ಸದಸ್ಯರು | ಸದಸ್ಯರು |
| 12 | ಸ್ವಯಂ ಸೇವಕರು | ಸದಸ್ಯರು |
| 13 | ಪಂಚಾಯಿತಿ ಅಭಿವೃದ್ಧಿ ಅಧಿಕಾರಿ | ಸದಸ್ಯ ಕಾರ್ಯದರ್ಶಿ |

- ಮಾಜಿ ಗ್ರಾಮ ಪಂಚಾಯತಿ ಸದಸ್ಯರು ಸ್ವಯಂ ಸೇವಕರಾಗಲು ಇಚ್ಛಿಸಿದ್ದಲ್ಲಿ ಗ್ರಾಮ ಪಂಚಾಯತಿ ಮಟ್ಟದ ಕಾರ್ಯಪಡೆಯಲ್ಲಿ ಸ್ವಯಂ ಸೇವಕರಾಗಿ ಭಾಗವಹಿಸಬಹುದು.
- ಗ್ರಾಮ ಪಂಚಾಯತಿ ಸಿಬ್ಬಂದಿಗಳು ಗ್ರಾಮ ಪಂಚಾಯತಿ ಮಟ್ಟದ ಕಾರ್ಯಪಡೆಯ ಜವಾಬ್ದಾರಿಗಳನ್ನು ನಿರ್ವಹಿಸಲು ಸಹಕರಿಸತಕ್ಕದ್ದು.

2. **ಗ್ರಾಮ ಮಟ್ಟದ ಕಾರ್ಯಪಡೆ.-**

| ಕ್ರ.ಸಂ. | ಸಮಿತಿ ಸದಸ್ಯರ ವಿವರ | ಹುದ್ದೆ |
|---|---|---|
| 1 | ಗ್ರಾಮದ ಮತಗಟ್ಟೆ ಅಧಿಕಾರಿಗಳು | ಸಂಚಾಲಕರು |
| 2 | ವೈದ್ಯಾಧಿಕಾರಿಗಳು ಅಥವಾ ಅವರ ಪ್ರತಿನಿಧಿ | ಸದಸ್ಯರು |
| 3 | ಗ್ರಾಮ ಲೆಕ್ಕಿಗರು | ಸದಸ್ಯರು |
| 4 | ಗ್ರಾಮದ ಎಲ್ಲಾ ಆಶಾ ಕಾರ್ಯಕರ್ತೆಯರು | ಸದಸ್ಯರು |
| 5 | ಗ್ರಾಮದ ಎಲ್ಲಾ ಅಂಗನವಾಡಿ ಕಾರ್ಯಕರ್ತೆಯರು | ಸದಸ್ಯರು |
| 6 | ವಾಟರ್‌ಮ್ಯಾನ್ (ನೀರುಗಂಟಿ) | ಸದಸ್ಯರು |
| 7 | ಎಲ್ಲಾ ಕೊರೊನಾ ಸೈನಿಕರು | ಸದಸ್ಯರು |
| 8 | ಪಂಚಾಯತಿ ಅಭಿವೃದ್ಧಿ ಅಧಿಕಾರಿಯಿಂದ ನಾಮನಿರ್ದೇಶಿತ ಗ್ರಾಮ ಪಂಚಾಯತಿ ಸಿಬ್ಬಂದಿ/ವಿ.ಆರ್.ಪಿ/ಸಿ.ಆರ್.ಪಿ. | ಸಂಯೋಜಕರು |

ಉಲ್ಲೇಖಿತ ಸರ್ಕಾರದ ಸುತ್ತೋಲೆಯಂತೆ ಗ್ರಾಮ ಪಂಚಾಯತಿ ಮಟ್ಟದ ಕಾರ್ಯಪಡೆಯು ಮತ್ತು ಗ್ರಾಮ ಮಟ್ಟದ ಕಾರ್ಯಪಡೆಯು ಜವಾಬ್ದಾರಿಗಳನ್ನು ನಿರ್ವಹಿಸತಕ್ಕದ್ದಾಗಿದೆ.

(ಉಮಾ ಮಹದೇವನ್)
ಸರ್ಕಾರದ ಪ್ರಧಾನ ಕಾರ್ಯದರ್ಶಿ (ಪಂ.ರಾಜ್),
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ.

**ಇವರಿಗೆ:**

1. ರಾಜ್ಯದ ಎಲ್ಲಾ ಜಿಲ್ಲಾ ಪಂಚಾಯಿತಿಗಳ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು.
2. ರಾಜ್ಯದ ಎಲ್ಲಾ ತಾಲ್ಲೂಕು ಪಂಚಾಯಿತಿಗಳ ಕಾರ್ಯನಿರ್ವಾಹಕ ಅಧಿಕಾರಿಗಳು.
3. ರಾಜ್ಯದ ಎಲ್ಲಾ ಗ್ರಾಮ ಪಂಚಾಯಿತಿಗಳ ಆಡಳಿತಾಧಿಕಾರಿಗಳು ಮತ್ತು ಪಂಚಾಯಿತಿ ಅಭಿವೃದ್ಧಿ ಅಧಿಕಾರಿಗಳು.
4. ಸಂಪಾದಕರು, ಕರ್ನಾಟಕ ವಿಕಾಸ, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ.
5. ಗಣಕಕೋಶ – ಇಲಾಖಾ ವೆಬ್‌ಸೈಟ್‌ನಲ್ಲಿ ಪ್ರಕಟಿಸಲು.

Scanned with CamScanner

6. ಹೆಚ್ಚುವರಿ ಪ್ರತಿ/ ಶಾಖಾ ರಕ್ಷಾ ಕಡತ.

**ಮಾಹಿತಿಗಾಗಿ:**

1. ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಸಚಿವರ ಆಪ್ತ ಕಾರ್ಯದರ್ಶಿಗಳು.
2. ಸರ್ಕಾರದ ಮುಖ್ಯ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿಗಳು.
3. ಅಭಿವೃದ್ಧಿ ಆಯುಕ್ತರು ಹಾಗೂ ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿರವರ ಆಪ್ತ ಕಾರ್ಯದರ್ಶಿಗಳು.
4. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ರವರ ಆಪ್ತ ಕಾರ್ಯದರ್ಶಿಗಳು.
5. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು/ ಸರ್ಕಾರದ ಪ್ರಧಾನ ಕಾರ್ಯದರ್ಶಿ (ಪಂ.ರಾಜ್), ಗ್ರಾ.ಅ. & ಪಂ.ರಾಜ್ ಇಲಾಖೆ ರವರ ಆಪ್ತ ಕಾರ್ಯದರ್ಶಿ.
6. ಸರ್ಕಾರದ ಕಾರ್ಯದರ್ಶಿಗಳು, ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ.

Scanned with CamScanner